## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 671(720)
ಉತ್ತರಿಸಬೇಕಾದ ದಿನಾಂಕ : 21.02.2024
ಸದಸ್ಯರ ಹೆಸರು : ಶ್ರೀ ಎಸ್.ರವಿ
(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಮೂಲಕ ಮಾಸಿಕ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಖಾತೆಗೆ ನೇರವಾಗಿ ಪಿಂಚಣಿ ಜಮಾ ಮಾಡುವ ಹೊಸ ತಂತ್ರಾಂಶವನ್ನು ಸರ್ಕಾರವು ಜಾರಿಗೆ ತಂದಿದ್ದರೂ ಕೂಡ, ಈ ತಂತ್ರಾಂಶದಲ್ಲಿ ಸಾಕಷ್ಟು ತಾಂತ್ರಿಕ ಸಮಸ್ಯೆಗಳು ಎದುರಾಗುತ್ತಿರುವುದರಿಂದ ಸಾವಿರಾರು ಅರ್ಹ ಫಲಾನುಭವಿಗಳು ಪದೇ ಪದೇ ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಬೇಕಾಗುವಂತಹ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕೇಂದ್ರ ಸರ್ಕಾರವು The Aadhaar (Targeted Delivery of Financial & Other Subsides, Benefit and Services) Act, 2016ನ್ನು ಜಾರಿಗೆ ತಂದಿರುವ ಹಿನ್ನಲೆಯಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರುವ ಎಲ್ಲಾ ಫಲಾನುಭವಿಗಳಿಗೂ ಹಾಗೂ ಹೊಸದಾಗಿ ಸೌಲಭ್ಯ ಕೋರಿ ಬರುವ ಅರ್ಜಿದಾರರಿಗೂ ಸಹ ಆಧಾರ್ ಸಂಖ್ಯೆಯನ್ನು ಕಡ್ಡಾಯಗೊಳಿಸಿ ದಿನಾಂಕ:23-01-20217 ರಂದು ಅಧಿಸೂಚನೆ ಹೊರಡಿಸಲಾಗಿದೆ.<br>ಸಾಮಾಜಿಕ ಭದ್ರತಾ ಯೋಜನೆಗಳಡಿ ವಿವಿಧ ಮಾಸಿಕ ಪಿಂಚಣಿಗಳನ್ನು ಪಡೆಯುತ್ತಿರುವ ಫಲಾನುಭವಿಗಳಿಗೆ ಡಿಸೆಂಬರ್-2023 ಮಾಹೆಯಿಂದ ಆಧಾರ್ ಆಧಾರಿತ ಪಿಂಚಣಿ ವ್ಯವಸ್ಥೆಯಡಿ (AEPS) ಪಿಂಚಣಿ ಪಾವತಿಸಲು ದಿನಾಂಕ:30-12-2023 ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ.<br>ಸದರಿ ಸರ್ಕಾರಿ ಆದೇಶವನ್ನು ಅನುಸರಿಸಿ Aadhar Authentication ಮತ್ತು NPCI Validation ಯಶಸ್ವಿಯಾಗಿರುವ ಸುಮಾರು 74.82 ಲಕ್ಷ ಫಲಾನುಭವಿಗಳಿಗೆ ಆಧಾರ್ ಆಧಾರಿತ ಪಿಂಚಣಿ ವ್ಯವಸ್ಥೆಯಡಿ (AEPS) ಡಿಸೆಂಬರ್-2023 ರ ಮಾಹೆಯಿಂದ ಕೇಂದ್ರಿಕೃತವಾಗಿ ನಿರ್ದೇಶನಾಲಯದ ವತಿಯಿಂದ ಪಿಂಚಣಿ ಪಾವತಿಸಲು ಕ್ರಮವಹಿಸಲಾಗಿದೆ.<br>ಆಧಾರ್ ಆಧಾರಿತ ಪಿಂಚಣಿ ವ್ಯವಸ್ಥೆಯಡಿ (AEPS) ಫಲಾನುಭವಿಯ ಆಧಾರ್ ಸಂಖ್ಯೆ ಜೋಡಣೆಯಾಗಿರುವ ಬ್ಯಾಂಕ್/ ಅಂಚೆ ಉಳಿತಾಯ ಖಾತೆಗೆ ಪಿಂಚಣಿ ಜಮಾ ಆಗುತ್ತಿದೆ. ಫಲಾನುಭವಿಗಳ ಖಾತೆಗೆ ಆಧಾರ್ ಜೋಡಣೆ ಹಾಗೂ NPCI Mapping ಆಗಿಲದ್ದಿದ್ದರೆ ಕೋಡಲೆ ಅದನ್ನು ಸಹ ಮಾಡಿಸಲು ವ್ಯಾಪಕವಾಗಿ ತಿಳಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಈ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ ಅರ್ಹ ಫಲಾನುಭವಿಗಳಿಗೆ ಮಾಸಿಕ ಪಿಂಚಣಿ ದೊರಕುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಆಧಾರ್ ಆಧಾರಿತ ಪಿಂಚಣಿ ವ್ಯವಸ್ಥೆಯಡಿ (AEPS) ಪಿಂಚಣಿ ಪಾವತಿಸಲು ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳು ಇರುವುದಿಲ್ಲ.<br>ಪಿಂಚಣಿ ಪಾವತಿಗೆ ಸಂಬಂಧಿಸಿದಂತೆ ಫಲಾನುಭವಿಗಳು ಸರ್ಕಾರಿ ಕಛೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಂತಹ |

| | | |
|---|---|---|
| | | ಫಲಾನುಭವಿಗಳ ಪಿಂಚಣಿಯು ಯಾವ ಬ್ಯಾಂಕ್/ ಅಂಚೆ ಉಳಿತಾಯ ಖಾತೆಗೆ ಜಮಾ ಆಗಿದೆ ಎಂಬ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಫಲಾನುಭವಿಗಳ ಉಳಿತಾಯ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡಿಸುವ ಹಾಗೂ NPCI Mapping ಮಾಡಿಸುವ ವಿಧಾನದ ಬಗ್ಗೆ ಮಾಹಿತಿ ನೀಡುವಲ್ಲಿ ಗ್ರಾಮ ಆಡಳಿತಾಧಿಕಾರಿಗಳ ಮೂಲಕ ಮನವರಿಕೆ ಮಾಡಲಾಗುತ್ತಿದೆ.<br>ಈ ಸಂಬಂಧ ದಿನಪತ್ರಿಕೆಗಳಲ್ಲಿ ಮತ್ತು ರೇಡಿಯೋ ಚಾನಲ್ ಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕ್ರಮವಹಿಸಲಾಗಿದೆ.<br>ಅರ್ಜಿ ಸ್ವೀಕೃತಿಯಿಂದ ಪಿಂಚಣಿ ಪಾವತಿವರೆಗೆ ಎಲ್ಲಾ ಹಂತಗಳಲ್ಲಿಯೂ ತಂತ್ರಾಂಶದ ಮೂಲಕ ಫಲಾನುಭವಿಗಳ ಮಾಹಿತಿ ನಿರ್ವಹಣೆಯನ್ನು ತಾಲ್ಲೂಕು ಮಟ್ಟದಲ್ಲಿ ಮಾಡುತ್ತಿರುವುದರಿಂದ ಫಲಾನುಭವಿಯ ಆಧಾರ್‌ಸಂಖ್ಯೆಯು ಎನ್.ಪಿ.ಸಿ.ಐ ನಲ್ಲಿ ಮ್ಯಾಪಿಂಗ್‌ಮಾಡಿಸುವುದು ಫಲಾನುಭವಿಗಳ ಜವಾಬ್ದಾರಿಯಾಗಿರುತ್ತದೆ.<br>Aadhaar Authentication Fail ಆಗಿರುವ ಮತ್ತು NPCI Mapping ಆಗಲು ಬಾಕಿಯಿರುವ ಫಲಾನುಭವಿಗಳಿಗೆ ಈ ಹಿಂದಿನ ವ್ಯವಸ್ಥೆಯಡಿ ಫಲಾನುಭವಿಗಳ ಖಾತೆಗೆ ಪಿಂಚಣಿ ಪಾವತಿಸಲು ಕ್ರಮವಹಿಸಲಾಗುತ್ತಿದೆ |

**ಕಡತ ಸಂಖ್ಯೆ:ಆರ್‌ಡಿ 34 ಕೆಎಟಿ ಎಸ್‌ಎಸ್‌ಪಿ 2024**

**( ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**